ಇಲಾಖೆ / ವಿಷಯ: DEPARTMENT / SUBJECT: ತೀರ್ಪು

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 24/03/2019

# ಮಲ್ಯ ಆಸ್ತಿ ಜಪ್ತಿಗೆ ಆದೇಶ

**ನವದೆಹಲಿ:** ವಿದೇಶಿ ವಿನಿಮಯ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಾರಿಯಾಗಿರುವ ಉದ್ಯಮಿ ವಿಜಯ ಮಲ್ಯ ಬೆಂಗಳೂರಿನಲ್ಲಿ ಹೊಂದಿರುವ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ದೆಹಲಿಯ ಚೀಫ್ ಮೆಟ್ರೋಪಾಲಿಟನ್ ಕೋರ್ಟ್ ಆದೇಶಿಸಿದೆ. ಈ ಬಗ್ಗೆ ಬೆಂಗಳೂರಿನ ಪೊಲೀಸರು ಜಾರಿ ನಿರ್ದೇಶನಾಲಯದ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಎನ್.ಕೆ.ಮಿತ್ತಲ್ ಮೂಲಕ ಸಲ್ಲಿಸಿದ ಮನವಿ ಪರಿಗಣಿಸಿದ ಕೋರ್ಟ್ ಈ ಆದೇಶ ನೀಡಿದೆ. ಜು.10 ರೊಳಗಾಗಿ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಸೂಚಿಸಿದೆ ಮತ್ತು ಅದೇ ದಿನ ವಿದೇಶಿ ವಿನಿಮಯ ನಿಯಮ ಉಲ್ಲಂಘಿಸಿದ ಪ್ರಕರಣದ ವಿಚಾರಣೆಯನ್ನೂ ನಿಗದಿಪಡಿಸಲಾಗಿದೆ.

ಬೆಂಗಳೂರಿನ ಪೊಲೀಸರು ಉದ್ಯಮಿ ಮಲ್ಯಗೆ ಸೇರಿದ 159 ಆಸ್ತಿ ಪತ್ತೆ ಮಾಡಿರುವುದಾಗಿ ಕೋರ್ಟ್‌ಗೆ ಮಾಹಿತಿ ನೀಡಿದ್ದರು. ಆದರೆ ಕೋರ್ಟ್ ಆದೇಶವಿಲ್ಲದ ಕಾರಣ ಮುಂದಿನ ಕ್ರಮ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ ಎಂದು ತಿಳಿಸಿದ್ದರು. ಕಳೆದ ವರ್ಷದ ಮೇ 8ರಂದು ಬೆಂಗಳೂರಿನ ಮಲ್ಯ ಆಸ್ತಿ ಜಪ್ತಿಗೆ ಇದೇ ಕೋರ್ಟ್ ಆದೇಶಿಸಿತ್ತು.